# ಕೃಷಿ ವಿಶ್ವ ವಿದ್ಯಾನಿಲಯ
## ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
### ಜಿ.ಕೆ.ವಿ.ಕೆ., ಬೆಂಗಳೂರು-560065
### * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

**ದಿನಾಂಕ:** 26.09.2023

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

### (ದಿನಾಂಕ 27-09-2023 ರಿಂದ 01-10-2023 ವರೆಗೆ)

| ನಿಯತಾಂಕಗಳು | 27.09.2023 | 28.09.2023 | 29.09.2023 | 30.09.2023 | 01.10.2023 |
|---|---|---|---|---|---|
| ಮಳೆ (ಮಿ ಮಿ) | 5 | 4 | 5 | 4 | 4 |
| ಗರಿಷ್ಠ ಉಷ್ಣಾಂಶ °(ಡಿ.ಸೆ. ) | 29 | 29 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 21 | 20 | 21 | 20 | 20 |
| ಮೋಡ (ಪ್ರಮಾಣ) | 7 | 7 | 7 | 7 | 7 |
| ಆರ್ದ್ರತೆ 7.20 ಬೆ (ಶೇ) | 90 | 90 | 92 | 90 | 90 |
| ಆರ್ದ್ರತೆ 2.20 ಮ (ಶೇ) | 88 | 88 | 90 | 88 | 88 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 6 | 7 | 8 | 9 | 9 |
| ಗಾಳಿಯ ದಿಕ್ಕು ( ಡಿಗ್ರಿ) | 252 | 248 | 248 | 248 | 248 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0-29.0°C** ಮತ್ತು ಕನಿಷ್ಠ **20.0-21.0°C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **90-92 %** ಇದ್ದು ಮಧ್ಯಾಹ್ನ **88-90 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **6-9** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

### “ಹಸ್ತಕ್ಕೆ ಹದ, ಚಿತ್ತಕ್ಕೆ ಮಳೆ !”

- ಹಸ್ತ ನಕ್ಷತ್ರದ ಮಳೆಯ ಕಾಲವು ಸೆಪ್ಟೆಂಬರ್ ತಿಂಗಳ 27 ರಿಂದ ಅಕ್ಟೋಬರ್ 10 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 105.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| **ಸಾಮಾನ್ಯ** | | ➢ ಹಗುರ ಮಳೆಯ ಅವಕಾಶ ಇರುವುದರಿಂದ ಮುಂಗಾರು ಬಿತ್ತನೆಯನ್ನು ಭೂಮಿಯ ತೇವಾಂಶದ ಆಧಾರದಲ್ಲಿ ಮುಂದುವರಿಸಿ.<br>➢ ಮುಂಗಾರು ಬೆಳೆಗಳಿಗೆ ಅಂತರ ಬೇಸಾಯ ಮಾಡಿ, ಬುಡಕ್ಕೆ ಮಣ್ಣನ್ನು ಸೇರಿಸಿ ಇದರಿಂದ ತೇವಾಂಶ ಸಂರಕ್ಷ ಣೆಯಾಗುತ್ತದೆ.<br>➢ ಗೊಬ್ಬರದ ಗಿಡಗಳನ್ನು ಮತ್ತು ಕಳೆಗಿಡಗಳನ್ನು ಭೂ ಹೊದಿಕೆಯಾಗಿ ಬೆಳೆಗಳಿಕೆ ಹಾಕಿ ಇದರಿಂದ ಗೊಬ್ಬರ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ.<br>➢ ಬಿತ್ತನೆಯಾಗಿರುವ ರಾಗಿಯಲ್ಲಿ ಖಾಲಿ ಇರುವ ಜಾಗಗಳಲ್ಲಿ ರಾಗಿ ಗಿಡಗಳನ್ನು ನಾಟಿ ಮಾಡಿ ಇದರಿಂದ ಗಿಡಗಳ ಸಂಖ್ಯೆಯನ್ನು ಕಾಪಾಡಿಕೊಳ್ಳಬಹುದು ಹಾಗು ತೆಂಡೆ ಹೊಡೆಯಲು ಸಹಾಯವಾಗುತ್ತದೆ ಮತ್ತು ಉತ್ತಮ ಇಳುವರಿಯನ್ನು ಪಡೆಯಬಹುದು. |
| **ಮುಂಗಾರು ಬೆಳೆಗಳು** | ಬೆಳವಣಿಗೆ ಹಂತ ಮತ್ತು ಹೂವಿನ ಹಂತ | **ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್-301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್-365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>➢ ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ-9 ಮತ್ತು ಕೆ.ಬಿ.ಎಚ್-1,<br>➢ ತೊಗರಿ ಬೆಳೆಯಲ್ಲಿ ಮೊಗ್ಗು ಮತ್ತು ಹೂವಿನ ಹಂತದಲ್ಲಿ ಕಾಯಿಕೊರಕ ಹುಳುವಿನ ಜೈವಿಕ ಹತೋಟಿ ಮಾಡಲು ಎಕರೆಗೆ 200 ಎಲ್.ಇ ನಂಜು ರೋಗಾಣು (ಹೆಚ್.ಎ.ಎನ್.ಪಿ.ವಿ) ಗಳನ್ನು 400 ಲೀಟರ್ ನೀರಿನಲ್ಲಿ ಸೇರಿಸಿ ಶೇ.0.1 ಟೀಪಾಲ್ ಮತ್ತು ಶೇ. 0.5 ರ ಬೆಲ್ಲದ ಪಾಕವನ್ನು ಬೆರೆಸಿ ಸಾಯಂಕಾಲದ ಸಮಯದಲ್ಲಿ ಸಿಂಪಡಿಸಬೇಕು. ಇದರಿಂದ ಮರಿ ಹುಳುಗಳಿಗೆ |

| | | |
|---|---|---|
| | | ನಂಜಾಣು ರೋಗ ತಗಲಿ ತಲೆ ಕೆಳಗಾಗಿ ನೇತಾಡುತ್ತಾ ಸಾಯುತ್ತವೆ ಮತ್ತು ಹೆಲಿಕೊವರ್ಪ ಮೋಹಕ ಬಲೆಗಳನ್ನು ಹೆಕ್ಟೇರ್ ಗೆ 10 ನ್ನು ಬಳಸಬೇಕು ಹಾಗು 20 ದಿನಗಳಿಗೊಮ್ಮೆ ಮೋಹಕ ವಸ್ತು (ಲ್ಯೂರ್) ಬದಲಿಸಬೇಕು.<br>➢ ತೊಗರಿ ಬೆಳೆಯಲ್ಲಿ ಸೊರಗು ರೋಗದ ಹತೋಟಿಗೆ ಕಾರ್ಬೆನ್‌ಡೈಜಿಮ್ 50 ಡಬ್ಲೂ. ಪಿ. 2 ಗ್ರಾಂ/ಲೀ ನೀರಿನಲ್ಲಿ ಬೆರೆಸಿ ಬುಡಕ್ಕೆ ಸುರಿಯಿರಿ.<br>➢ ಸೊರಗು ರೋಗದ ಗಿಡಗಳನ್ನು ಕಿತ್ತು ಒಂದೆಡೆ ಹಾಕಿ ಸುಡಬೇಕು.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ. |
| **ತೋಟಗಾರಿಕೆ ಬೆಳೆಗಳು** | | |
| ಮಾವು | | 1. ಉತ್ತಮ ಮಳೆಯ ಅವಕಾಶವಿರುವುದರಿಂದ ಮಾವಿನ ತೋಪುಗಳಲ್ಲಿ ಆಳವಾದ ಉಳುಮೆ ಮಾಡಿ<br>2. ದ್ವಿದಳ ದಾನ್ಯಗಳನ್ನು ಬಿತ್ತನೆ ಮಾಡಿ ಒಂದುವರೆ ತಿಂಗಳ ನಂತರ ಭೂಮಿಗೆ ಸೇರಿಸುವುದರಿಂದ ಉತ್ತಮ ಗೊಬ್ಬರ ಮಾವಿನ ಮರಗಳಿಗೆ ಸಿಗುತ್ತದೆ ಮತ್ತು ಮುಂದಿನ ಬಾರಿ ಉತ್ತಮ ಪಸಲು ನಿರೀಕ್ಷಿಸಬಹುದು . |
| **ಪಶುಸಂಗೋಪನೆ** | | ➢ ಬಿಸಿಲು, ಮಳೆ ಮತ್ತು ಬೀಸುವ ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಪ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.